# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಮೀನುಗಾರರ ಸಂಕಷ್ಟ ಪರಿಹಾರ ನಿಧಿಗೆ ಅಂಶದಾನ-ಸಂತ್ರಸ್ಥರಿಗೆ ಪರಿಹಾರ ನೀಡಲು 2010-11ನೇ ಸಾಲಿನಲ್ಲಿ ಮಂಜೂರಾಗಿರುವ ರೂ.50.00 ಲಕ್ಷಗಳ ಪೈಕಿ ಉಳಿದ ರೂ.25.00 ಲಕ್ಷ ಅನುದಾನ ಬಿಡುಗಡೆಗೊಳಿಸುವಿಕೆ.

ಓದಲಾಗಿದೆ:-
(1) ಆದೇಶ ಸಂಖ್ಯೆ:ಎಸ್‌ಡಬ್ಲ್ಯೂಡಿ/98/ಎಸ್‌ಎಫ್‌ಎಸ್/73 ದಿನಾಂಕ:23-03-1974.
(2) ಆದೇಶ ಸಂಖ್ಯೆ:ಪಸಂಮೀ/65/ಮೀಇಂಯೋ/2010 ದಿನಾಂಕ:08-04-2010.
(3) ಆದೇಶ ಸಂಖ್ಯೆ:ಪಸಂಮೀ/158/ಮೀಇಂಯೋ/2010 ದಿನಾಂಕ:16-08-2010.
(4) ಪತ್ರ ಸಂಖ್ಯೆ:ಮೀಸಾಕ/40/2010-11 ದಿನಾಂಕ:10-11-2010 ಮತ್ತು ದಿನಾಮಕ:28-12-2010.

******

## ಪ್ರಸ್ತಾವನೆ:

ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ಆದೇಶದಲ್ಲಿ ನೈಸರ್ಗಿಕ ವಿಕೋಪಗಳಿಂದ ಅಪತ್ತಿಗೀಡಾಗುವ ಮೀನುಗಾರರಿಗೆ ತುರ್ತಿನ ಸಮಯದಲ್ಲಿ ನೆರವು ನೀಡಲು ಮಾನ್ಯ ಮೀನುಗಾರಿಕೆ ಸಚಿವರ ಅಧ್ಯಕ್ಷತೆಯಲ್ಲಿ ಕರ್ನಾಟಕ ರಾಜ್ಯ ಮೀನುಗಾರರ ಸಂಕಷ್ಟ ಪರಿಹಾರ ನಿಧಿಯನ್ನು ಸ್ಥಾಪಿಸಲಾಗಿರುತ್ತದೆ. ಈ ನಿಧಿಗಾಗಿ ಹಣವನ್ನು ಸಾರ್ವಜನಿಕರಿಂದ, ಮೀನುಗಾರರ ಸಹಕಾರ ಸಂಘಗಳಿಂದ ಹಾಗೂ ಮೀನುಗಾರಿಕೆ ಇಲಾಖೆಯಿಂದ ವಂತಿಗೆ/ಕೊಡುಗೆ ರೂಪದಲ್ಲಿ ಸಂಗ್ರಹಿಸಲಾಗುತ್ತಿದ್ದು, ಈ ಮೂಲಗಳಿಂದ ಸದರಿ ನಿಧಿಗೆ ಸಾಕಷ್ಟು ಪ್ರಮಾಣದಲ್ಲಿ ಹಣ ಸಂಗ್ರಹವಾಗುತ್ತಿಲ್ಲ.

ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ಆದೇಶದಲ್ಲಿ, ಸದರಿ ಯೋಜನೆಯನ್ನು 2010-11ನೇ ಸಾಲಿಗೆ ಮುಂದುವರೆಸಲಾಗಿದೆ.

ಮೇಲೆ ಕ್ರಮ ಸಂಖ್ಯೆ (3)ರಲ್ಲಿ ಓದಲಾದ ಆದೇಶದಲ್ಲಿ, ಸದರಿ ಯೋಜನೆಗಾಗಿ 2010-11ನೇ ಸಾಲಿನಲ್ಲಿ ಮೊದಲನೇ ಮತ್ತು ಎರಡನೇ ತ್ರೈಮಾಸಿಕ ಅನುದಾನ ರೂ.25.00 ಲಕ್ಷಗಳನ್ನು ಬಿಡುಗಡೆಗೊಳಿಸಲಾಗಿದೆ.

ಮೇಲೆ ಕ್ರಮ ಸಂಖ್ಯೆ (4)ರಲ್ಲಿ ಓದಲಾದ ಪತ್ರದಲ್ಲಿ, ಮೀನುಗಾರಿಕೆ ನಿರ್ದೇಶಕರು ಇತ್ತೀಚಿನ ದಿನಗಳಲ್ಲಿ ಪ್ರಾಕೃತಿಕ ವಿಕೋಪಗಳಿಂದ ಮೀನುಗಾರರ ಸಂಕಷ್ಟಗಳು ಹೆಚ್ಚಾಗುತ್ತಿದ್ದು, ಪರಿಹಾರ ಕೋರಿ ಅನೇಕ ಪ್ರಸ್ತಾವನೆಗಳು ಬಾಕಿ ಇದ್ದು, ಪರಿಹಾರ ವಿತರಿಸಬೇಕಾಗಿರುವುದರಿಂದ, ಮೂರನೇ ಮತ್ತು ನಾಲ್ಕನೇ ತ್ರೈಮಾಸಿಕ ಅನುದಾನ ರೂ.25.00 ಲಕ್ಷಗಳನ್ನು ಬಿಡುಗಡೆ ಮಾಡುವಂತೆ ಕೋರಿರುತ್ತಾರೆ.

ಮೀನುಗಾರಿಕೆ ನಿರ್ದೇಶಕರ ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಆದೇಶ ಸಂಖ್ಯೆ:ಪಸಂಮೀ 158 ಮೀಇಯೋ 2010, ಬೆಂಗಳೂರು ದಿನಾಂಕ:03-03-2011**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಕರ್ನಾಟಕ ರಾಜ್ಯ ಮೀನುಗಾರರ ಸಂಕಷ್ಟ ಪರಿಹಾರ ನಿಧಿಗಾಗಿ 2010-11ನೇ ಸಾಲಿನ ಆಯವ್ಯಯದಲ್ಲಿ ಒದಗಿಸಲಾಗಿರುವ ರೂ.50.00 ಲಕ್ಷಗಳ ಪೈಕಿ ಮೂರನೇ ಮತ್ತು ನಾಲ್ಕನೇ ತ್ರೈಮಾಸಿಕ ಅನುದಾನವನ್ನು ಲೆಕ್ಕ ಶೀರ್ಷಿಕೆ "2405-00-103-0-15-104 ಅಂಶದಾನಗಳು (ಯೋಜನೆ)" ಅಡಿಯಲ್ಲಿ ರೂ.15.00 ಲಕ್ಷ; "2405-00-103-0-15-422 ವಿಶೇಷ ಘಟಕ ಯೋಜನೆ (ಯೋಜನೆ)" ಅಡಿಯಲ್ಲಿ ರೂ.7.50 ಲಕ್ಷ ಹಾಗೂ "2405-00-103-0-15-423 ಗಿರಿಜನ ಉಪಯೋಜನೆ (ಯೋಜನೆ)" ಅಡಿಯಲ್ಲಿ ರೂ.2.50 ಲಕ್ಷ ಹೀಗೆ ಒಟ್ಟು ರೂ.25.00 ಲಕ್ಷ (ಇಪ್ಪತ್ತೈದು ಲಕ್ಷ ರೂಪಾಯಿಗಳು ಮಾತ್ರ)ಗಳನ್ನು ಬಿಡುಗಡೆಗೊಳಿಸಲಾಗಿದೆ.

ಈ ಹಣವನ್ನು ಪೇಯೀಸ್ ರಸೀದಿ ಬಿಲ್ಲುಗಳ ಮೂಲಕ ರಾಜ್ಯ ಹುಜೂರ್ ಖಜಾನೆಯಿಂದ ತೆಗೆಯಲು ಹಾಗೂ ಮೀನುಗಾರಿಕೆ ನಿರ್ದೇಶಕರವರ ಹೆಸರಿನಲ್ಲಿ ಸಂಕಷ್ಟ ಪರಿಹಾರ ನಿಧಿ ಖಾತೆಯಲ್ಲಿಡಲು ಅನುಮತಿ ನೀಡಲಾಗಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ/64/ವೆಚ್ಚ-4/2011, ದಿನಾಂಕ:25-02-2011ರಲ್ಲಿ ನೀಡಿರುವ ಸಹಮತಿಯ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

ಡಿ.ಎಂ. ರಾಜಣ್ಣ
ಸರ್ಕಾರದ ಅಧೀನ ಕಾರ್ಯದರ್ಶಿ
ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ
(ಮೀನುಗಾರಿಕೆ)

(ಡಿ.ಎಂ.ರಾಜಣ್ಣ) 3/3
ಸರ್ಕಾರದ ಅಧೀನ ಕಾರ್ಯದರ್ಶಿ
ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ(ಮೀ)

ಇವರಿಗೆ:

1) ಮಹಾಲೇಖಪಾಲರು (ಎ ಮತ್ತು ಇ)(ಎಯು-1)(ಎಯು-2),ಕರ್ನಾಟಕ, ಬೆಂಗಳೂರು.
2) ಮೀನುಗಾರಿಕೆ ನಿರ್ದೇಶಕರು, ಬೆಂಗಳೂರು.
3) ಜಂಟಿ ನಿರ್ದೇಶಕರು, ಗಣಕ ಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
4) ಜಂಟಿ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
5) ಆಂತರಿಕ ಆರ್ಥಿಕ ಸಲಹೆಗಾರರು, ಕೃ.ತೋ. ಮತ್ತು ಪ.ಸಂ.ಮೀ. ಇಲಾಖೆ.
6) ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-4).
7) ಶಾಖಾ ರಕ್ಷಾ ಕಡತ:ಹೆಚ್ಚುವರಿ ಪ್ರತಿಗಳು.